## *Form No.4.*

## *Deposition Sheet( R.P.52)*

**ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಹೆಚ್ಚುವರಿ ಮುಖ್ಯ**

**ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಾರ್ಕಳ.**

**MVC:408/2023**

**PW1**

| | | |
|---|---|---|
| ಸಾಕ್ಷಿಯ ಹೆಸರು | : | ಗುರುಪ್ರಸಾದ |
| ತಂದೆ ಹೆಸರು | : | ಗೋಪಾಲ ನ್ಯಾಕ್ |
| ಪ್ರಾಯ | : | 20 ವರ್ಷ |
| ಉದ್ಯೋಗ | : | ಪೈಂಟರ್ |
| ವಾಸ | : | ಹೆಂಗವಳ್ಳಿ ಗ್ರಾಮ, ಕುಂದಾಪುರ ತಾಲೂಕು |

ದಿನಾಂಕ **:15.12.2023** ರಂದು ಪಿಡಬ್ಲ್ಯೂ - 1 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

**ಮುಖ್ಯ ವಿಚಾರಣೆ:** ಶ್ರೀ ಎನ್.ವಿ.ಪಿ. ಅರ್ಜಿದಾರರ ಪರ ವಕೀಲರಿಂದ:

1. ನಾನು ಈ ಕೇಸಿನ ಅರ್ಜಿದಾರ. ನನ್ನ ಮುಖ್ಯ ವಿಚಾರಣೆಯ ಬದಲಿಗೆ ನಾನು ಈ ದಿನ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು , ಸದರಿ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಅಂಶಗಳು ಸತ್ಯವಾಗಿವೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 1 ಎಂದು, ದೂರಿನ ದೃಢೀಕೃತ

ಪ್ರತಿಯನ್ನು ಹಾಜರುಪಡಿಸಿದ್ದು, ನಿಪಿ - 2 ಎಂದು, ಸ್ಥಳ ಮಹಜರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 3 ಎಂದು, ಕಚ್ಚಾ ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 4 ಎಂದು, ಐಎಮ್‌ವಿ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 5 ಎಂದು, ಕಲಂ 160 ರ ನೋಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 6 ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 7 ಎಂದು, ನನ್ನ ಆಧಾರ್ ಕಾರ್ಡನ್ನು ಮತ್ತು ಅದರ ನೋಟರೀಕೃತ ನಕಲನ್ನು ಹಾಜರುಪಡಿಸಿದ್ದೇನೆ. (ನೋಟರೀಕೃತ ನಕಲನ್ನು ಮೂಲಪ್ರತಿಯೊಂದಿಗೆ ಹೋಲಿಸಿ ನೋಡಿದ ನಂತರ ಮೂಲಪ್ರತಿಯನ್ನು ಸಾಕ್ಷಿಗೆ ಹಿಂತಿರುಗಿಸಲಾಯಿತು). ಆಧಾರ್ ಕಾರ್ಡಿನ ನೋಟರೀಕೃತ ನಕಲನ್ನು ನಿಪಿ - 8 ಎಂದು, ಬಾಡಿಗೆ ಕರಾರು ಪತ್ರವನ್ನು ನಿಪಿ - 9 ಎಂದು, ಪೋಲೀಸರು ಸಲ್ಲಿಸಿರುವ ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 10 ಎಂದು, ಸದರಿ ವಾಹನದ ಮಾಲೀಕರಿಗೆ ಪೋಲೀಸರು ಕಲಂ 133 ರಡಿಯಲ್ಲಿ ನೀಡಿದ ನೋಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 11 ಎಂದು, ಸದರಿ ನೋಟೀಸಿಗೆ ನೀಡಿರುವ ಪ್ರತ್ಯುತ್ತರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 12 ಎಂದು, ನನ್ನ ಡಿಎಲ್ ನ ನೋಟರೀಕೃತ ನಕಲನ್ನು ನಿಪಿ - 13 ಎಂದು, ನನ್ನ ಐಟಿಐ ನ 2 ಪ್ರಮಾಣ ಪತ್ರದ ನೋಟರೀಕೃತ ನಕಲನ್ನು ನಿಪಿ - 14 ಮತ್ತು ನಿಪಿ - 15 ಎಂದು (ನೋಟರೀಕೃತ ನಕಲನ್ನು ಮೂಲಪ್ರತಿಯೊಂದಿಗೆ ಹೋಲಿಸಿ ನೋಡಿದ ನಂತರ

ಮೂಲಪ್ರತಿಯನ್ನು ಸಾಕ್ಷಿಗೆ ಹಿಂತಿರುಗಿಸಲಾಯಿತು), ಒಳರೋಗಿ ಬಿಲ್ಲನ್ನು ಮತ್ತು ಇತರೆ 16 ಬಿಲ್ಲುಗಳನ್ನು ನಿಪಿ - 16 ಎಂದು, 4 ಔಷಧಿ ಚೀಟಿಗಳನ್ನು ಒಟ್ಟಾಗಿ ನಿಪಿ - 17 ಎಂದು ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೋರಿದಂತೆ ಆದೇಶ ಮಾಡಬೇಕಾಗಿ ಪ್ರಾರ್ಥನೆ.

**ಪಾಟೀ ಸವಾಲುಃ** ಶ್ರೀ 1 ಮತ್ತು 2 ನೇ ಎದುರುದಾರರ ಪರ ವಕೀಲರು ಹಾಜರಿರುವುದಿಲ್ಲ. ಆದ್ದರಿಂದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,

ಕಾರ್ಕಳ.